**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರ ಉತ್ತರ.**

ವಿಷಯ:

ಬೆಳಗಾವಿ ಜಿಲ್ಲೆಯ ನೂತನ ಪಟ್ಟಣ ಪಂಚಾಯತಿಗಳಲ್ಲಿ ಮತ್ತು ಪುರಸಭೆಗಳಲ್ಲಿ ನಿರ್ಮಿಸುತ್ತಿರುವ ನೂತನ ಬಡಾವಣೆಗಳಲ್ಲಿ (ಲೇಔಟ್) ಸಾರ್ವಜನಿಕರ ಉಪಯೋಗಕ್ಕಾಗಿ ಮೀಸಲಿಟ್ಟಿರುವ ತೆರೆದ ಖಾಲಿ ಸ್ಥಳ(ನಿವೇಶನ)ಗಳಲ್ಲಿ (ಲಂಗ್ ಸ್ಪೇಸ್) ಗಳಲ್ಲಿ ಸಂಘ ಸಂಸ್ಥೆಗಳು ಮತ್ತು ಇತರೆ ಜನರು ಅತಿಕ್ರಮವಾಗಿ ಆಕ್ರಮಿಸುತ್ತಿರುವ ಸ್ಥಳಗಳನ್ನು ಮತ್ತು ಒತ್ತುವರಿ ಜಾಗಗಳನ್ನು ತೆರವುಗೊಳಿಸಿ ಅಲ್ಲಿ ಮರ, ಗಿಡಗಳನ್ನು ಬೆಳೆಸಿ ಅರಣ್ಯೀಕರಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯ ಬಯಸಿರುವುದು.

ಉತ್ತರ:

ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 17 ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿ ಮತ್ತು ಪುರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿರುತ್ತದೆ. ಬೆಳಗಾವಿ ಜಿಲ್ಲೆಯ 11 ಪಟ್ಟಣ ಪಂಚಾಯತಿ ಮತ್ತು ಪುರಸಭೆಗಳಲ್ಲಿ ಯಾವುದೇ ನೂತನ ಬಡಾವಣೆಗಳನ್ನು ನಿರ್ಮಾಣಗೊಂಡಿರುವುದಿಲ್ಲ ಹಾಗೂ ಉಳಿದ 06 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕ ಉಪಯೋಗಕ್ಕಾಗಿ ಕಾಯ್ದಿರಿಸಿರುವ ನಿವೇಶನಗಳು ಅತಿಕ್ರಮಣವಾಗಿರುವುದಿಲ್ಲ. ಬಡಾವಣೆಗಳಲ್ಲಿನ ಉದ್ಯಾನವನ ಮತ್ತು ಬಯಲು ಪ್ರದೇಶಗಳಲ್ಲಿ ಗಿಡ ಮರಗಳನ್ನು ನೆಡಲು ಅವಕಾಶವಿರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 27 ಟಿಟಿಪಿ 2016 ದಿ: 24.05.2017 ರನ್ವಯ ರಚಿಸಲಾದ The Karnataka Planning Authorities (Allotment of Civic Amenity Sites) Rules, 2016 ರನ್ವಯ ನಾಗರೀಕ ಸೌಲಭ್ಯದ ನಿವೇಶನಗಳನ್ನು ಹಂಚಿಕೆ ಮಾಡಬೇಕಾಗಿರುತ್ತದೆ.

ಸಂಖ್ಯೆ: ನಅಇ 73 ಜಿಇಎಲ್ 2021 (e)

(ಎನ್. ನಾಗರಾಜ್ ಎಂಟಿಬಿ)
ಪೌರಾಡಳಿತ ಮತ್ತು ಸಕ್ಕರೆ ಸಚಿವರು